ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-234338

CHAMUNDESHWARI ELECTRICITY SUPPLY CORPORATION LIMITED
(A Government of Karnataka Undertaking)
Corporate Office,
CESC, Mysuru-570017
Web Site: www.cescmysore.org.
E-mail ID:gmhrd@cescmysore.org

Company Identity Number[CIN]:- U40109KA2004SGC035177

ಕ್ರಮಾಂಕ : ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/2021-22 / cys - 329 ದಿನಾಂಕ: 28 MAY 2021

## ಸುತ್ತೋಲೆ

ವಿಷಯ: ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ 2016ನ್ನು ಚಾವಿಸನಿನಿಯಲ್ಲಿ ಅಳವಡಿಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ರಾಜ್ಯ ಪತ್ರ ಸಂಖ್ಯೆ:ವ್ಯಶಾಇ 22 ಶಾಸನ 2016, ದಿನಾಂಕ: 29.06.2017.
2. ಇಂಧನ ಇಲಾಖೆಯ ಪತ್ರ ಸಂಖ್ಯೆ: ಎನರ್ಜಿ 219 ಸಮನ್ವಯ 2019 ದಿನಾಂಕ: 13.02.2020.

*****

ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ(ತಿದ್ದುಪಡಿ) ಅಧಿನಿಯಮ 2016 ರಲ್ಲಿ ತಿಳಿಸಿರುವ ನಿಯಮಗಳನ್ವಯ ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು ನಿಯಮಿಸಿದ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಕೈಗೊಳ್ಳಬೇಕಾದ ಅಗತ್ಯ ನೋಟೀಸ್‌ಗಳು, ಪತ್ರ ವ್ಯವಹಾರಗಳು ಮತ್ತು ಪ್ರಕಟಣೆಗಳನ್ನು ಹೊರಡಿಸುವಾಗ ನಿರ್ಮಾಣ ಕಾಮಗಾರಿಗಳ ಮೌಲ್ಯ 50 ಲಕ್ಷ ರೂಪಾಯಿಗಳಿಗೆ ಮೀರದಂಥ ಕಾಮಗಾರಿಗಳ ಶೇಕಡ 17.15 ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಜಾತಿಗಳ ವರ್ಗಕ್ಕೆ ಸೇರಿದ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು ಮತ್ತು ಅಂತ ಕಾಮಗಾರಿಗಳ ಶೇಕಡ 6.95 ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಪಂಗಡಗಳ ವರ್ಗಕ್ಕೆ ಸೇರಿದ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡಲು ಕ್ರಮಕೈಗೊಳ್ಳುವುದು.

ಮುಂದುವರೆದು, ಟೆಂಡರನ್ನು ಎರಡು ಬಾರಿಗಳಲ್ಲಿ ಆಹ್ವಾನಿಸಿರುವುದಕ್ಕೆ ಪ್ರತಿಕ್ರಿಯೆಯಾಗಿ ಅನುಸೂಚಿತ ಜಾತಿಗಳು ಅಥವಾ ಸಂದರ್ಭಾನುಸಾರವಾಗಿ ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಂದ ಟೆಂಡರ್ ಸ್ವೀಕರಿಸದಿದ್ದಲ್ಲಿ, ಅಂಥ ಕಾಮಗಾರಿಗಳನ್ನು ಇತರರಿಗೆ ಟೆಂಡರ್ ನೀಡಬಹುದಾಗಿರುತ್ತದೆ.

ಮೇಲೆ ತಿಳಿಸಿರುವ ಅಂಶಗಳನ್ನು ಅಳವಡಿಸಿಕೊಂಡು ಚಾವಿಸನಿನಿ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಿಗಳು ಪಾರದರ್ಶಕತೆಯನ್ನು ಕಾಯ್ದುಕೊಂಡು ನಿಯಮಾನುಸಾರ ಟೆಂಡರ್ ಪ್ರಕ್ರಿಯೆಗಳನ್ನು ನಡೆಸುವಂತೆ ತಿಳಿಸಲಾಗಿದೆ.

| |
|---|
| ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿರುತ್ತದೆ. |

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು.

ಪ್ರತಿಗಳು:

1. ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನ ಇವರ ಅವಗಾಹನೆಗಾಗಿ.
2. ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
3. ಪ್ರಧಾನ ವ್ಯವಸ್ಥಾಪಕರು, ತಾಂತ್ರಿಕ/ವಾಣಿಜ್ಯ/ಖರೀದಿ/ಯೋಜನೆಗಳು/ಲೆಕ್ಕ ಮತ್ತು ಕಂದಾಯ/ಆ ಮತ್ತು ಮಾಸಂ/, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
4. ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ ಚಾಮರಾಜನಗರ-ಕೊಡಗು/ ಹಾಸನ/ಮಂಡ್ಯ ಇವರ ಮಾಹಿತಿಗಾಗಿ.
5. ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ಚಾಮರಾಜನಗರ-ಕೊಡಗು/ಹಾಸನ/ಮಂಡ್ಯರವರ ಮಾಹಿತಿಗಾಗಿ.
6. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿರವರುಗಳ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸಂಕ್ಷಿಪ್ತದಲ್ಲಿ ಮಾಹಿತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿಯವರ ಗಮನಕ್ಕೆ ತರುವಂತೆ ಕೋರಿದೆ.
7. ಸಹಾಯಕ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ನಿಗಮದ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
8. [illegible]

ನಿತ್ಯ-2